**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

DTE-ADMI0ACM2/12/2026 ( 2152834 )

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:24.08.2026.

**-:: ಸುತ್ತೋಲೆ ::-**

**ವಿಷಯ:** 2026-27ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ – ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ **ಪ್ರಥಮ ಸೆಮಿಸ್ಟರ್, ಪ್ರಥಮ ಸೆಮಿಸ್ಟರ್ ಅರೆಕಾಲಿಕ, ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ / ವೃತ್ತಿಪರ ಅಭ್ಯರ್ಥಿಗಳ ಲ್ಯಾಟರಲ್ ಎಂಟ್ರಿ ಡಿಪ್ಲೋಮಾಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ** ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ 29.05.2026, 09.07.2026, 17.07.2026 & 04.08.2026
2. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿ.

*********

2026-27ನೇ ಶೈಕ್ಷಣಿಕ ಸಾಲಿನ ಪ್ರಥಮ ಸೆಮಿಸ್ಟರ್ ಹಾಗೂ ಲ್ಯಾಟರಲ್ ಎಂಟ್ರಿ ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ದಿ:11.08.2026ರ ಒಳಗೆ ಪ್ರವೇಶ ಪಡೆಯಲು ಅವಧಿಯನ್ನು ವಿಸ್ತರಿಸಿ ಉಲ್ಲೇಖ(1)ರ ಪತ್ರದಲ್ಲಿ ಪ್ರವೇಶ ಪಡೆಯಲು ಅನುಮತಿ ನೀಡಲಾಗಿತ್ತು.

ಆದರೆ, ಸಂಬಂಧಪಟ್ಟ ಉಲ್ಲೇಖ(2)ರಲ್ಲಿನ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೆಲವು ಸೀಟುಗಳು ಭರ್ತಿ ಆಗದೆ ಖಾಲಿ ಇರುವುದರಿಂದ ಪ್ರವೇಶ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿರುವುದನ್ನು ಪರಿಗಣಿಸಿ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ **ಪ್ರಥಮ ಸೆಮಿಸ್ಟರ್, ಪ್ರಥಮ ಸೆಮಿಸ್ಟರ್ ಅರೆಕಾಲಿಕ, ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ / ವೃತ್ತಿಪರ ಅಭ್ಯರ್ಥಿಗಳ ಲ್ಯಾಟರಲ್ ಎಂಟ್ರಿ ಡಿಪ್ಲೋಮಾ ಕೋರ್ಸುಗಳಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳಿಗೆ ಇದೊಂದು ಕೊನೆಯ ಅವಕಾಶ ಆಗಿರುವುದಿಂದ ಅಂತಿಮ ದಿ:31.08.2026 ರವರೆಗೆ ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ದಿ:31.08.2026 ರೊಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ

Scanned with OKEN Scanner

ಮಾಡುವುದಲ್ಲದೆ, ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ನಿರ್ದೇಶನಾಲಯಕ್ಕೆ ವರದಿ ಮಾಡುವುದು.

**ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

**ಎ.ಐ.ಸಿ.ಟಿ.ಇ ಹಾಗೂ ಸರ್ಕಾರದ ನಿಯಮಗಳನ್ನು ಮೀರಿ ಮಾಡಿದಂತಹ ಪ್ರವೇಶಗಳಿಗೆ ಸಂಬಂಧ ಪಟ್ಟ ಸಂಸ್ಥೆಗಳ ಪ್ರಾಂಶುಪಾಲರು ನೇರ ಜವಾಬ್ದಾರರಾಗಿರುತ್ತಾರೆ.**

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು.**

**ಗೆ,**

| | |
|---|---|
| **ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ** - | ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ **ದಿ:31.08.2026**ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. |

**ಪ್ರತಿ ಮಾಹಿತಿಗಾಗಿ:-**

1) ನಿರ್ದೇಶಕರ ಆಪ್ತಶಾಖೆಗೆ.
2) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
3) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
4) ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
5) ಇ.ಆರ್.ಎಸ್ ವಿಭಾಗಕ್ಕೆ - ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
6) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7) ಕಡತಕ್ಕೆ.

Scanned with OKEN Scanner